ಇ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 2003–04ನೇ ಸಾಲಿನಲ್ಲಿ ಔಷಧಿ ಲಾಜಿಸ್ಟಿಕ್ ಸೊಸೈಟಿ ಅಸ್ತಿತ್ವಕ್ಕೆ ಬಂದಿರುವುದರಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಜಿಲ್ಲಾ ಶಸ್ತ್ರ ಚಿಕಿತ್ಸಕರು ಇವರಿಗೆ ಮುಕ್ತ ಅವಕಾಶವಿರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ವಂತ ಕಟ್ಟಡ ಒದಗಿಸುವುದು

4564 (5297) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು)

ಆ) ಇವುಗಳಲ್ಲಿ ಸ್ವಂತ ಕಟ್ಟಡ ಇರುವ ಮತ್ತು ಕಟ್ಟಡ ಇಲ್ಲದ ಕಾಲೇಜುಗಳು ಯಾವುವು: (ಜಿಲ್ಲಾವಾರು ವಿವರ ನೀಡುವುದು)

ಇ) ಈ ಕಾಲೇಜುಗಳಿಗೆ ಕಟ್ಟಡ ಕಟ್ಟಲು ಸರ್ಕಾರ ತೆಗೆದುಕೊಂಡಿರುವ ನಿಲುವೇನು:

ಈ) ಎಷ್ಟು ಕಾಮಗಾರಿಗಳಿಗೆ ಇತ್ತೀಚೆಗೆ ಮಂಜೂರಾತಿ ನೀಡಲಾಗಿದೆ: ಈ ಕಾಮಗಾರಿಗಳು ಯಾವ ಹಂತದಲ್ಲಿದೆ?

ಶ್ರೀ ಎಂ.ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ ಹಾಲಿ ಒಟ್ಟು 158 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ ಒಂದು ಸರ್ಕಾರಿ ಕಾನೂನು ಕಾಲೇಜು ಇರುತ್ತದೆ.

(ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ)

ಆ) 159 ಕಾಲೇಜುಗಳಲ್ಲಿ 98 ಕಾಲೇಜುಗಳಿಗೆ ಸ್ವಂತ ಕಟ್ಟಡ ಇರುತ್ತದೆ. 61 ಕಾಲೇಜುಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಇ) ಸ್ವಂತ ಕಟ್ಟಡವಿಲ್ಲದ 61 ಕಾಲೇಜುಗಳ ಪೈಕಿ 43 ಕಾಲೇಜುಗಳು ನಿವೇಶನ ಹೊಂದಿದ್ದು, ಇವುಗಳ ಪೈಕಿ 17 ಕಾಲೇಜುಗಳಿಗೆ ಹುಡ್ಕೊ ಯೋಜನೆಯಲ್ಲಿ ಹೊಸ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. 17 ಕಾಲೇಜು ಕಟ್ಟಡಗಳು ನಿರ್ಮಾಣ ಹಂತದಲ್ಲಿದ್ದು, ಪ್ರತಿ ವರ್ಷ ಸರ್ಕಾರದಿಂದ ಒದಗಿಸಲಾಗುತ್ತಿರುವ ಆಯವ್ಯಯದಲ್ಲಿ ಹಂತ ಹಂತವಾಗಿ ಕಟ್ಟಡ ನಿರ್ಮಿಸಲಾಗುತ್ತಿದೆ. ಇನ್ನುಳಿದ 18 ಕಾಲೇಜುಗಳು ನಿವೇಶನ ಹೊಂದಬೇಕಾಗಿದ್ದು, ಪ್ರಯತ್ನಿಸಲಾಗುತ್ತಿದೆ. ನಿವೇಶನಗಳು ಲಭ್ಯವಾದಂತೆ ದೊರೆಯಬಹುದಾದ ಅನುದಾನವನ್ನು ಉಪಯೋಗಿಸಿಕೊಂಡು ಕಟ್ಟಡ ನಿರ್ಮಿಸಲು ಪ್ರಯತ್ನಿಸಲಾಗುವುದು.

ಈ) 17 ಹೊಸ ಕಾಲೇಜು ಕಟ್ಟಡಗಳಿಗೆ ಇತ್ತೀಚೆಗೆ ಮಂಜೂರಾತಿ ನೀಡಲಾಗಿದೆ. ಈ ಕಾಮಗಾರಿಗಳು ಸಧ್ಯದಲ್ಲೆ ಆರಂಭವಾಗಲಿವೆ.

ರಾಜ್ಯದಲ್ಲಿ ಭಾರತ ಸೇವಾದಳ ಘಟಕಗಳ ಸ್ಥಾಪನೆ

4565 (5298) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ "ಭಾರತ ಸೇವಾದಳ" ಘಟಕಗಳನ್ನು ಸ್ಥಾಪಿಸಲಾಗಿದೆ: (ಜಿಲ್ಲಾವಾರು ವಿವರ ನೀಡುವುದು)

ಆ) "ಭಾರತ ಸೇವಾ ದಳ" ದಲ್ಲಿ ತರಬೇತಿ ಹೊಂದಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ "ಗೌರವಧನ" ನೀಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದ ಒಟ್ಟು 27 ಜಿಲ್ಲೆಗಳಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ "ಭಾರತ ಸೇವಾದಳ" ದ ಘಟಕಗಳನ್ನು ಸ್ಥಾಪಿಸಲಾಗಿದೆ. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

ಆ) "ಭಾರತ ಸೇವಾದಳ" ದಲ್ಲಿ 10 ವರ್ಷಗಳ ಅವಿರತ ಸೇವಾ ಸಲ್ಲಿಸಿದ ಶಿಕ್ಷಕರಿಗೆ ಗೌರವ ಧನವನ್ನು ನೀಡುವ ಬಗ್ಗೆ ಪರಿಶೀಲಿಸಿ ಇದರಿಂದ ಉಂಟಾಗುವ ಆರ್ಥಿಕ ಹೊರೆಯನ್ನು ಗಮನದಲ್ಲಿರಿಸಿ ಈ ಕೋರಿಕೆಯನ್ನು ಸರ್ಕಾರ ಒಪ್ಪಿರುವುದಿಲ್ಲ.

ರಾಜ್ಯದಲ್ಲಿ ಪದವಿ ಪೂರ್ವ ಹಾಗೂ ಮೆಟ್ರಿಕ್ ಪರೀಕ್ಷೆ ಫಲಿತಾಂಶ

4566 (5299) : ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ 3 ಶೈಕ್ಷಣಿಕ ವರ್ಷಗಳಲ್ಲಿ ಮೆಟ್ರಿಕ್ ಹಾಗೂ ಪದವಿ ಪೂರ್ವ ತರಗತಿಗಳ ಫಲಿತಾಂಶಗಳ ಜಿಲ್ಲಾವಾರು ವಿವರ ನೀಡುವುದು?

ಶ್ರೀ ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಕಳೆದ 3 ಶೈಕ್ಷಣಿಕ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪದವಿ ಪೂರ್ವ ಪರೀಕ್ಷೆಗಳ ಜಿಲ್ಲಾವಾರು ಫಲಿತಾಂಶಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.